# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. : 705
ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಡಾ: ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 12-03-2025
ಉತ್ತರಿಸುವ ಸಚಿವರು : ಲೋಕೋಪಯೋಗಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತೇರದಾಳ ವಿಧಾನಸಭಾ ಕ್ಷೇತ್ರದ ಢವಳೇಶ್ವರ ಗ್ರಾಮದಲ್ಲಿ ಹರಿಯುವ ಮಲಪ್ರಭಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಮಂಜೂರಾಗಿದೆಯೇ; ಯಾವಾಗ ಮಂಜೂರು ಮಾಡಲಾಗಿದೆ: | ಲೋಕೋಪಯೋಗಿ ಇಲಾಖೆ ಅಧೀನದ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ತೇರದಾಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಢವಳೇಶ್ವರ ಗ್ರಾಮದ ಬಳಿ ಘಟಪ್ರಭಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲು ಮಂಜೂರಾಗಿರುತ್ತದೆ. ಸದರಿ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ಲೋಇ 34 ಇಎಪಿ 2014, ದಿನಾಂಕ:31.01.2017 ರಲ್ಲಿ ಮಂಜೂರಾತಿ ನೀಡಲಾಗಿರುತ್ತದೆ. |
| ಆ) | ಪ್ರಾರಂಭದಲ್ಲಿ ಈ ಸೇತುವೆ ನಿರ್ಮಾಣಕ್ಕೆ ಕಾಯ್ದಿರಿಸಿದ ಅನುದಾನವೆಷ್ಟು; ಇದರ ಕಾಮಗಾರಿ ಕೈಗೊಳ್ಳಲು ಭೂಮಿ ಪೂಜೆ ನೆರವೇರಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವಾಗ ನೆರವೇರಿಸಲಾಗಿದೆ; | ಸದರಿ ಸೇತುವೆ ನಿರ್ಮಾಣ ಕಾಮಗಾರಿಯ ಮೂಲ ಗುತ್ತಿಗೆ ಮೊತ್ತ ರೂ.16.89 ಕೋಟಿಗಳಾಗಿರುತ್ತದೆ.<br>ಸದರಿ ಕಾಮಗಾರಿಯನ್ನು ಕೈಗೊಳ್ಳಲು ದಿನಾಂಕ:01.03.2018 ರಂದು ಭೂಮಿ ಪೂಜೆ ನೆರವೇರಿಸಲಾಗಿರುತ್ತದೆ. |
| ಇ) | ಢವಳೇಶ್ವರ ಸೇತುವೆ ನಕ್ಷೆ ಮೊದಲು ಮಂಜೂರಾದ ಮೂಲ ನಕ್ಷೆಯಂತೆ ನಿರ್ಮಾಣವಾಗುತ್ತಿದೆಯೇ ಅಥವಾ ನಕ್ಷೆ ಬದಲಾಗಿದೆಯೇ; ಹೌದಾದರೆ, ನಕ್ಷೆ ಬದಲಾದ ನಂತರ ಕಾಮಗಾರಿಗೆ ಕಾಯ್ದಿರಿಸಿದ ಅನುದಾನದಲ್ಲಿ ಬದಲಾವಣೆ ಮಾಡಲಾಗಿದೆಯೇ? | ಢವಳೇಶ್ವರ ಗ್ರಾಮದ ಬಳಿ ಘಟಪ್ರಭಾ ನದಿಗೆ ಅಡ್ಡಲಾಗಿ ಕೈಗೆತ್ತಿಕೊಳ್ಳಲಾಗಿರುವ ಸೇತುವೆ ನಿರ್ಮಾಣ ಕಾಮಗಾರಿಯ ಮೂಲ ನಕ್ಷೆಯನ್ನು 2019 ರಲ್ಲಿ ಉಂಟಾದ ಅನಿರೀಕ್ಷಿತ ಭಾರಿ ಪ್ರವಾಹದ ಪರಿಣಾಮವಾಗಿ ನದಿಯಲ್ಲಿ ಹರಿದ ಹೆಚ್ಚಿನ ನೀರಿನ ಮಟ್ಟಕ್ಕೆ ಅನುಗುಣವಾಗಿ ಬದಲಾಯಿಸಲಾಗಿದ್ದು, ಅದರಂತೆ ಪರಿಷ್ಕೃತ ನಕ್ಷೆಯನ್ವಯ 537.02 ಮೀ ರಿಂದ 542.15 ಮೀವರೆಗೆ ಏರಿಕೆಯಾದ ನೀರಿನ ಮಟ್ಟಕ್ಕೆ ತಕ್ಕಂತೆ 24.60 ಮೀ ಉದ್ದದ 5 ಅಂಕಣಗಳಿಂದ 8 ಅಂಕಣಗಳಿಗೆ ಹೆಚ್ಚುವರಿಯಾಗಿ ಪರಿಗಣಿಸಿ, ತಕ್ಕಂತೆ ತಳಪಾಯದಲ್ಲಿ ಬದಲಾವಣೆಯಾಗಿ ರೂ.30.76 ಕೋಟಿ ಪರಿಷ್ಕೃತ ಮೊತ್ತಕ್ಕೆ ಅಂದಾಜಿಸಲಾಗಿದೆ.<br><br>ಪರಿಷ್ಕೃತ ನಕ್ಷೆಯಂತೆ ಸೇತುವೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳುವಲ್ಲಿ ಮೂಲ ಗುತ್ತಿಗೆ ಮೊತ್ತದಲ್ಲಿ ಹೆಚ್ಚಳವಾಗಿರುತ್ತದೆ. |

ಸಂಖ್ಯೆ. ಲೋಇ 89 ಇಎಪಿ 2025

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು